# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 845 |
| ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಗಣಿ ಮತ್ತು ಭೂ-ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸುವ ದಿನಾಂಕ | : | 23.07.2024 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ರಾಜಧಾನಿಯಲ್ಲಿರುವ ಲಾಲ್ ಬಾಗ್ / ಕಬ್ಬನ್ ಪಾರ್ಕ್ ಉದ್ಯಾನವನಗಳು ಪ್ರವಾಸಿಗರನ್ನು ಸುಮಾರು ದಶಕಗಳಿಂದ ಆಕರ್ಷಣೆಗೆ ಸೆಳೆಯುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಸದರಿ ಉದ್ಯಾನವನಗಳಲ್ಲಿ ಅನೈತಿಕ ಚಟುವಟಿಕೆಗಳಾದ ಮದ್ಯಸೇವನೆ, ಹೆಣ್ಣುಮಕ್ಕಳೊಂದಿಗೆ ಅಸಭ್ಯವರ್ತನೆ ಇತ್ಯಾದಿ ನಡೆಯುತ್ತಿರುವುದು ತೋಟಗಾರಿಕೆ ಇಲಾಖೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಕೃತ್ಯಗಳನ್ನು ತಡೆಗಟ್ಟಲು ಯಾವ ಕ್ರಮಗಳನ್ನು ಕೈಗೊಂಡಿದೆ; | ಅಂತಹ ಪ್ರಕರಣಗಳು ಗಮನಕ್ಕೆ ಬಂದಿರುವುದಿಲ್ಲ.<br>ಲಾಲ್ ಬಾಗ್ ಹಾಗೂ ಕಬ್ಬನ್ ಉದ್ಯಾನವನದ ಆವರಣದಲ್ಲಿ ಇಂತಹ ಚಟುವಟಿಕೆಗಳು ಜರುಗದಂತೆ ಮುನ್ನಚ್ಚರಿಕೆಯಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br>(1) ಉದ್ಯಾನವನದ ಆವರಣದಲ್ಲಿ ನಿಯಮ ಉಲ್ಲಂಘಿಸಿ ಅನೈತಿಕ ಚಟುವಟಿಕೆಗಳಾದ ಮದ್ಯ ಸೇವನೆ, ಹೆಣ್ಣು ಮಕ್ಕಳೊಂದಿಗೆ ಅಸಭ್ಯ ವರ್ತನೆ ತೋರುವವರ ವಿರುದ್ಧ ಸೂಕ್ತ ಕಾನೂನು ಕ್ರಮ/ದಂಡ ವಿಧಿಸಲಾಗುವುದು ಎಂಬ ಮಾಹಿತಿಯನ್ನು ಒಳಗೊಂಡ ನಾಮಫಲಕಗಳನ್ನು ಅಳವಡಿಸಲಾಗಿದೆ.<br>(2) ಪ್ರತಿನಿತ್ಯ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಿ ಎಲ್ಲಾ ರೀತಿಯ ಅಸಭ್ಯ ವರ್ತನೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>(3) ಉದ್ಯಾನವನದಲ್ಲಿ ಸಾರ್ವಜನಿಕರು ಸಭ್ಯವಾಗಿ ವರ್ತಿಸುವಂತೆ ಮಾಹಿತಿಯನ್ನು ಧ್ವನಿವರ್ಧಕಗಳ ಮೂಲಕ ಆಗಿಂದಾಗ್ಯೆ ಪ್ರಕಟಗೊಳಿಸಲಾಗುತ್ತಿದೆ.<br>(4) ಪ್ರತಿನಿತ್ಯ ಉದ್ಯಾನವನದ ಕ್ಷೇತ್ರಾಧಿಕಾರಿಗಳ ಮೇಲುಸ್ತುವಾರಿಯಲ್ಲಿ ಕಾಲ-ಕಾಲಕ್ಕೆ ಉದ್ಯಾನವನದ ಪರಿಶೀಲನೆಯನ್ನು ಕೈಗೊಂಡು ಯಾವುದೇ ರೀತಿಯ ಅಸಭ್ಯ ವರ್ತನೆಗಳು ಜರುಗದಂತೆ ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. |

| | | |
|---|---|---|
| | | (5) ಲಾಲ್ ಬಾಗ್ ಹಾಗೂ ಕಬ್ಬನ್ ಉದ್ಯಾನವನಗಳ ವ್ಯಾಪ್ತಿಯ ಔಟ್ ಪೋಸ್ಟ್ ಪೋಲೀಸರು ಉದ್ಯಾನವನಗಳ ವ್ಯಾಪ್ತಿಯಲ್ಲಿ ಆಗಿಂದಾಗ್ಗೆ ಗಸ್ತು ಕೈಗೊಳ್ಳುತ್ತಿದ್ದು, ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಬಾರದ ರೀತಿಯಲ್ಲಿ ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ. |
| (ಆ) | ಸದರಿ ಉದ್ಯಾನವನದಲ್ಲಿ ಇತ್ತೀಚಿನ ದಿನಗಳಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗಿದ್ದು, ಪ್ಲಾಸ್ಟಿಕ್ ಮುಕ್ತ ಉದ್ಯಾನವನವನ್ನು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಲಾಲ್ ಬಾಗ್ ಹಾಗೂ ಕಬ್ಬನ್ ಉದ್ಯಾನವನದ ಆವರಣದಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ತಡೆಗಟ್ಟುವ ಹಿತದೃಷ್ಟಿಯಿಂದ ಈ ಕೆಳಕಂಡ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br>(1) ಪ್ಲಾಸ್ಟಿಕ್ ಬಳಕೆಯನ್ನು ಉದ್ಯಾನವನಗಳ ಆವರಣದಲ್ಲಿ ನಿಷೇಧಿಸಿರುವ ಸಂಬಂಧ ನಾಮಫಲಕಗಳನ್ನು ಅಳವಡಿಸಲಾಗಿದ್ದು, ಸದರಿ ಫಲಕಗಳಲ್ಲಿ ನಿಯಮ ಮೀರಿ ಪ್ಲಾಸ್ಟಿಕ್ ಬಳಸುವವರ ವಿರುದ್ಧ ದಂಡ ವಿಧಿಸುವ /ಕಾನೂನು ಕ್ರಮ ಕೈಗೊಳ್ಳುವ ಸಂಬಂಧದ ಮಾಹಿತಿಯನ್ನು ಸಾರ್ವಜನಿಕರ ಮಾಹಿತಿಗೆ ಪ್ರಕಟಗೊಳಿಸಲಾಗಿದೆ.<br>(2) ಸಾರ್ವಜನಿಕರು ಪ್ಲಾಸ್ಟಿಕ್‌ನೊಂದಿಗೆ ಉದ್ಯಾನವನವನ್ನು ಪ್ರವೇಶಿಸುವುದನ್ನು ತಡೆಯುವ ಸಲುವಾಗಿ ಉದ್ಯಾನವನದ ಎಲ್ಲಾ ಪ್ರವೇಶ ದ್ವಾರಗಳಲ್ಲಿ ಮಹಿಳಾ ಹೋಂಗಾರ್ಡ್ ಭದ್ರತಾ ಸಿಬ್ಬಂದಿಗಳಿಂದ, ಉದ್ಯಾನವನ ಪ್ರವೇಶಿಸುವವರನ್ನು ತಪಾಸಣೆ ನಡೆಸಿ, ಪ್ಲಾಸ್ಟಿಕ್‌ನೊಂದಿಗೆ ಸಾರ್ವಜನಿಕರು ಉದ್ಯಾನವನವನ್ನು ಪ್ರವೇಶಿಸದಂತೆ ತಡೆಗಟ್ಟಲು ಅಗತ್ಯ ಕ್ರಮವಹಿಸಲಾಗುತ್ತಿದೆ.<br>(3) ನಿಯಮ ಮೀರಿ ಉದ್ಯಾನವನದ ಆವರಣದಲ್ಲಿ ಪ್ಲಾಸ್ಟಿಕ್ ಬಳಸುವವರ ವಿರುದ್ಧ ದಂಡ/ಕಾನೂನು ಕ್ರಮ ಕೈಗೊಳ್ಳಲು ಅಗತ್ಯ ಕ್ರಮವಹಿಸಲಾಗುತ್ತಿದೆ.<br>(4) ಲಾಲ್ ಬಾಗ್ ಮತ್ತು ಕಬ್ಬನ್ ಉದ್ಯಾನವನಗಳ ಒಟ್ಟಾರೆ ಪರಿಸರವನ್ನು ಪ್ಲಾಸ್ಟಿಕ್ ಮುಕ್ತಗೊಳಿಸಲು ಪರಿಸರ ಪೂರಕಗೊಳಿಸಲು ಒತ್ತನ್ನು ನೀಡಲಾಗಿರುತ್ತದೆ. |

HORTI 330 HGM 2024

S. S. [signature]

**(ಎಸ್.ಎಸ್.ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು